ಜೆಎಸ್‌ಎಸ್ ಮಹಾವಿದ್ಯಾಪೀಠ
ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಶಿವಾನುಭವ ದಾಸೋಹ–342

**31 ಅಕ್ಟೋಬರ್ 2026 * ಶನಿವಾರ * ಸಂಜೆ 6.00**

**ಜೆಎಸ್‌ಎಸ್ ಪಬ್ಲಿಕ್ ಶಾಲೆ ಸಭಾಂಗಣ, ಡಾ. ಎಸ್. ರಾಧಾಕೃಷ್ಣನ್‌ನಗರ, ಮೈಸೂರು**

---

ದಿವ್ಯಾಶೀರ್ವಾದ
**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**
ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಸುತ್ತೂರು ಶ್ರೀಕ್ಷೇತ್ರ

ಅಧ್ಯಕ್ಷತೆ
**ಶ್ರೀ ನಿತೇಶ್ ಪಾಟೀಲ್**
ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ

ಉಪನ್ಯಾಸ
**ಶ್ರೀ ಎಸ್.ಎಲ್. ಚನ್ನಬಸವಣ್ಣ**
ಉಪನಿರ್ದೇಶಕರು, ಕರ್ನಾಟಕ ಪೊಲೀಸ್ ಅಕಾಡೆಮಿ, ಮೈಸೂರು

**ವಿಷಯ : ಶರಣರ ದೃಷ್ಟಿಯಲ್ಲಿ ಸಾರ್ವಜನಿಕ ಆಡಳಿತ**

ವಚನ ಗಾಯನ
**ಶ್ರೀಮತಿ ಶಶಿಕಲಾ ಮಲ್ಲಿಕಾರ್ಜುನಸ್ವಾಮಿ ಮತ್ತು ತಂಡ**
ಮೈಸೂರು

ಪ್ರಾಯೋಜಕರು
**ಶ್ರೀ ಬಿ. ಮಂಜುನಾಥ್**
ಉಪನಿರ್ದೇಶಕರು, ನಗರ ಕೇಂದ್ರ ಗ್ರಂಥಾಲಯ, ಮೈಸೂರು

**ತಮಗೆಲ್ಲ ಆದರದ ಸ್ವಾಗತ**

ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮ ಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ, ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿಯಂಥ ಸಂಸ್ಥೆಗಳ ಮೂಲಕ ಧರ್ಮ ದಾಸೋಹವನ್ನು ಪ್ರಾರಂಭಿಸಿದರು. 1986ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಯನ್ನು ಸ್ಥಾಪಿಸಿ ಆಧ್ಯಾತ್ಮಿಕ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ದತ್ತಿಯ ವತಿಯಿಂದ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 12.5.1996ರಂದು 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ಶ್ರೀ ನಿತೇಶ್ ಪಾಟೀಲ್‌ರವರು** ವಿಜಯಪುರ ಜಿಲ್ಲೆ ಸಿಂದಗಿಯವರು. ಅಲಹಾಬಾದ್‌ನ ಮೋತೀಲಾಲ್ ನೆಹರೂ ರಾಷ್ಟ್ರೀಯ ತಾಂತ್ರಿಕ ಸಂಸ್ಥೆಯ ಬಿ.ಟೆಕ್. ಪದವೀಧರರು. 2012ರಲ್ಲಿ ಐಎಎಸ್ ಅಧಿಕಾರಿಗಳಾಗಿ ನೇಮಕಗೊಂಡು, ಉಪವಿಭಾಗಾಧಿಕಾರಿಗಳಾಗಿ ವೃತ್ತಿಜೀವನ ಆರಂಭಿಸಿದರು. ಅನಂತರ ವಿವಿಧ ಹುದ್ದೆಗಳಲ್ಲಿ ಯಶಸ್ವಿಯಾಗಿ ಕಾರ್ಯ ನಿರ್ವಹಿಸಿ ಪ್ರಸ್ತುತ ಮೈಸೂರಿನಲ್ಲಿ ಪ್ರಾದೇಶಿಕ ಆಯುಕ್ತರಾಗಿದ್ದಾರೆ. ನರೇಗಾ ಯೋಜನೆಯ ಯಶಸ್ವಿ ನಿರ್ವಹಣೆಗಾಗಿ ರಾಷ್ಟ್ರೀಯ ಪ್ರಶಸ್ತಿ ಹಾಗೂ ಉತ್ತಮ ಜಿಲ್ಲಾ ಚುನಾವಣಾಧಿಕಾರಿ ಪುರಸ್ಕಾರಗಳಿಗೆ ಭಾಜನರಾಗಿದ್ದಾರೆ.

**ಶ್ರೀ ಎಸ್.ಎಲ್. ಚನ್ನಬಸವಣ್ಣನವರು** ಬೆಳಗಾವಿ ಜಿಲ್ಲೆಯ ರಾಮದುರ್ಗದವರು. ಧಾರವಾಡದ ಕರ್ನಾಟಕ ಕಾಲೇಜಿನಲ್ಲಿ ಚಿನ್ನದ ಪದಕದೊಂದಿಗೆ ಬಿಎ (ಅಪರಾಧಶಾಸ್ತ್ರ ಮತ್ತು ವಿಧಿವಿಜ್ಞಾನ) ಹಾಗೂ ಸಾರ್ವಜನಿಕ ಆಡಳಿತದಲ್ಲಿ ಎಂಎ ಮತ್ತು ಪತ್ರಿಕೋದ್ಯಮ ಡಿಪ್ಲೊಮಾ ಪಡೆದಿದ್ದಾರೆ. ಐಪಿಎಸ್ ಸೇವೆಗೆ ಆಯ್ಕೆಯಾಗಿ ಕರ್ನಾಟಕದ ವಿವಿಧ ಜಿಲ್ಲೆಗಳಲ್ಲಿ ದಕ್ಷತೆಯಿಂದ ಕಾರ್ಯ ನಿರ್ವಹಿಸಿದ್ದಾರೆ. ಪ್ರಸ್ತುತ ಮೈಸೂರಿನ ಕರ್ನಾಟಕ ಪೊಲೀಸ್ ಅಕಾಡೆಮಿಯ ಉಪನಿರ್ದೇಶಕರಾಗಿದ್ದಾರೆ. ಸಾಹಿತ್ಯದಲ್ಲೂ ಅಪಾರ ಆಸಕ್ತಿಯನ್ನು ಹೊಂದಿದ್ದಾರೆ. ಪ್ರವಾಸ ಕಥನಗಳನ್ನು ರಚಿಸಿದ್ದಾರೆ. ಇವರ ಅನನ್ಯ ಸೇವೆಗಾಗಿ ವಿಶ್ವಸಂಸ್ಥೆಯ ಶಾಂತಿಪಾಲನಾ ಪದಕ, ಕೇಂದ್ರ ಗೃಹಸಚಿವರ ತನಿಖಾ ಪದಕ, ಮುಖ್ಯಮಂತ್ರಿಗಳ ಚಿನ್ನದ ಪದಕ ಸೇರಿದಂತೆ ಹಲವಾರು ಪುರಸ್ಕಾರಗಳು ಸಂದಿವೆ.

**ಶ್ರೀ ಬಿ. ಮಂಜುನಾಥ್‌ರವರ** ಜನ್ಮಸ್ಥಳ ಹೆಗ್ಗಡದೇವನಕೋಟೆ. ಮೈಸೂರು ವಿಶ್ವವಿದ್ಯಾನಿಲಯದಿಂದ ಚಿನ್ನದ ಪದಕದೊಂದಿಗೆ ಗ್ರಂಥಾಲಯ ವಿಜ್ಞಾನದಲ್ಲಿ ಸ್ನಾತಕೋತ್ತರ ಪದವಿ ಪಡೆದಿದ್ದಾರೆ. 1997ರಲ್ಲಿ ಸುತ್ತೂರು ಶ್ರೀಕ್ಷೇತ್ರದ ಜೆಎಸ್‌ಎಸ್ ವಸತಿ ಶಾಲೆಯಲ್ಲಿ ವಿಜ್ಞಾನ ಶಿಕ್ಷಕರಾಗಿ ಮತ್ತು ಗ್ರಂಥಪಾಲಕರಾಗಿ ವೃತ್ತಿಜೀವನವನ್ನು ಆರಂಭಿಸಿದರು. 1999ರಲ್ಲಿ ನೋಯಿಡಾದ ಜೆಎಸ್‌ಎಸ್ ತಾಂತ್ರಿಕ ಶಿಕ್ಷಣ ಅಕಾಡೆಮಿಯಲ್ಲಿ ಗ್ರಂಥಪಾಲಕರಾಗಿ ಸೇವೆ ಮುಂದುವರಿಸಿದರು. 2005ರಲ್ಲಿ ಮುಖ್ಯ ಗ್ರಂಥಾಲಯಾಧಿಕಾರಿಗಳಾಗಿ ಆಯ್ಕೆಗೊಂಡು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕರ್ತವ್ಯ ನಿರ್ವಹಿಸಿದ್ದಾರೆ. ಪ್ರಸ್ತುತ ಮೈಸೂರು ನಗರ ಕೇಂದ್ರ ಗ್ರಂಥಾಲಯದ ಉಪ ನಿರ್ದೇಶಕರಾಗಿದ್ದಾರೆ. ಇವರ ಪತ್ನಿ ಶ್ರೀಮತಿ ಹೆಚ್.ಎಂ. ಮಹೇಶ್ವರಿಯವರು ಗೃಹಿಣಿಯಾಗಿದ್ದಾರೆ. ಪುತ್ರ ಶ್ರೀ ಯಶಸ್ ಬಿ. ಮಂಜುನಾಥ್‌ರವರು ಸಾಫ್ಟ್‌ವೇರ್ ಇಂಜಿನಿಯರ್.